# All India Radio: Bangalore
# National Bulletin In Kannada
# 06.12.2025 19.35 p.m.

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮೈಸೂರು ಮತ್ತು ಕಲಬುರಗಿಯಲ್ಲಿ ನಿಮ್ಹಾನ್ಸ್ ತರಹದ ಕೇಂದ್ರಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರದಿಂದ ೧೦೦ ಕೋಟಿ ರೂಪಾಯಿ ಘೋಷಣೆ

೨. ಹೈನುಗಾರಿಕೆ ವಲಯದಲ್ಲಿ ಮುಂದಿನ ಐದು ವರ್ಷದಲ್ಲಿ ಜಾನುವಾರು ಸಾಕಣೆದಾರರ ಆದಾಯವನ್ನು ಶೇಕಡ ೨೦ರಷ್ಟು ಹೆಚ್ಚಿಸುವ ಗುರಿ - ಕೇಂದ್ರ ಸಚಿವ ಅಮಿತ್ ಶಾ

೩. ತೆರಿಗೆ ವ್ಯವಸ್ಥೆಯನ್ನು ಸರಳೀಕರಿಸುವತ್ತ ಕೇಂದ್ರ ಸರ್ಕಾರ ಕಾರ್ಯನಿರ್ವಹಿಸುತ್ತಿದೆ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್

೪. ಭಾರತ-ದಕ್ಷಿಣಾ ಆಫ್ರಿಕಾ ಮೂರನೇ ಏಕದಿನ ಪಂದ್ಯ ಕ್ರಿಕೆಟ್ ಭಾರತಕ್ಕೆ ೨೭೧ ರನ್ ಗುರಿ ನೀಡಿದ ದಕ್ಷಿಣಾ ಆಫ್ರಿಕಾ

***************

ಕರ್ನಾಟಕದ ಮೈಸೂರು ಮತ್ತು ಕಲ್ಬುರ್ಗಿಯಲ್ಲಿ ನಿಮ್ಹಾನ್ಸ್ ತರಹದ ಇನ್ನೆರಡು ಕೇಂದ್ರಗಳನ್ನು ರಾಜ್ಯ ಸರ್ಕಾರ ೧೦೦ ಕೋಟಿ ರೂಪಾಯಿಗಳ ಆರಂಭಿಕ ವೆಚ್ಚದೊಂದಿಗೆ ಸ್ಥಾಪಿಸಲಿದೆ ಎಂದು ರಾಜ್ಯ ಉನ್ನತ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಘೋಷಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ನಡೆದ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ - ನಿಮ್ಹಾನ್ಸ್‌ನ ೨೮ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಆಧುನಿಕ ಸಂಶೋಧನೆ ಹಾಗೂ ವೈದ್ಯರ ಅವಿರತ ಶ್ರಮದಿಂದ ನಿಮ್ಹಾನ್ಸ್ ಸಂಸ್ಥೆ ಇಂದು ಭಾರತದಲ್ಲಿಯೇ ಅತ್ಯುನ್ನತ ಸ್ಥಾನ ಪಡೆದಿದೆ ಎಂದರು. ಪದವಿ ಪಡೆದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಮಾತನಾಡಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ನರ ವಿಜ್ಞಾನವು ಒಂದು ಕಿರಿದಾದ ವಿಭಾಗವಲ್ಲ. ಇದು ದೇಶದ ಸಾರ್ವಜನಿಕ ಆರೋಗ್ಯ ಆದ್ಯತೆಗಳಿಗೆ ಹಾಗೂ ಸಾಮಾಜಿಕ ಸ್ಥಿರತೆಗೆ ಕೇಂದ್ರವಾಗಿದೆ ಎಂದಿದ್ದಾರೆ.

ಇದೇ ವೇಳೆ ಮಾತನಾಡಿದ ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ, ಇಲ್ಲಿನ ವೈದ್ಯರು ನಿರಂತರ ಸಂಶೋಧನೆಯ ಮೂಲಕ ಈಗಾಗಲೇ ಮಾನಸಿಕ ವಿಜ್ಞಾನ ಕುರಿತು ಸಂಶೋಧನೆ ನಡೆಸಿ, ವಿಶ್ವದ ಅತ್ಯುತ್ತಮ ಜರ್ನಲ್ಸ್‌ಗಳಿಗೆ ಲೇಖನಗಳನ್ನು ಬರೆದಿದ್ದಾರೆ. ತಂತ್ರಜ್ಞಾನದ ಮೂಲಕ ರೋಗಿಗಳ ಮಾನಸಿಕ ಆರೋಗ್ಯವನ್ನು ಸುಧಾರಿಸುವಲ್ಲಿ ನಿಮ್ಹಾನ್ಸ್ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಶರಣ ಪ್ರಕಾಶ್ ಪಾಟೀಲ್

ಘಟಿಕೋತ್ಸವದಲ್ಲಿ ೨೫೧ ವಿದ್ಯಾರ್ಥಿಗಳು ವಿವಿಧ ಪದವಿಗಳು ಮತ್ತು ಪ್ರಮಾಣ ಪತ್ರಗಳನ್ನು ಸ್ವೀಕರಿಸಿದರು. ೨೮ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಶ್ರೇಷ್ಠತಾ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

***************

ಕೇಂದ್ರ ಸರ್ಕಾರವು ಹೈನುಗಾರಿಕೆ ವಲಯದಲ್ಲಿ ವೃತ್ತಾಕಾರದ ಆರ್ಥಿಕ ಮಾದರಿಯನ್ನು ಜಾರಿಗೆ ತರುವ ಮೂಲಕ, ಮುಂದಿನ ಐದು ವರ್ಷಗಳಲ್ಲಿ ಜಾನುವಾರು ಸಾಕಣೆದಾರರ ಆದಾಯವನ್ನು ಶೇಕಡಾ ಇಪ್ಪತ್ತರಷ್ಟು ಹೆಚ್ಚಿಸುವ ಗುರಿಯನ್ನು ಹೊಂದಿದೆ ಎಂದು ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ಘೋಷಿಸಿದರು.

ಗುಜರಾತ್‌ನ ಸನಾದರ್‌ನಲ್ಲಿ ಬನಾಸ್ ಡೈರಿಯ ಜೈವಿಕ ನೈಸರ್ಗಿಕ ಅನಿಲ ಮತ್ತು ರಸಗೊಬ್ಬರ ಸ್ಥಾವರವನ್ನು ಉದ್ಘಾಟಿಸಿ, ಬನಾಸ್ ಡೈರಿಯ ಅತ್ಯಾಧುನಿಕ ೧೫೦ ಟಿಪಿಡಿ ಹಾಲಿನ ಪುಡಿ ಮತ್ತು ಶಿಶು ಆಹಾರ ಸ್ಥಾವರಕ್ಕೆ ಶಿಲಾನ್ಯಾಸ ನೆರವೇರಿಸಿದ ನಂತರ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು ಈ ಘೋಷಣೆ ಮಾಡಿದರು.

ರಾಷ್ಟ್ರೀಯ ಗೋಕುಲ್ ಮಿಷನ್, ಪಶುಸಂಗೋಪನಾ ಮೂಲಸೌಕರ್ಯ, ರಾಷ್ಟ್ರೀಯ ಪ್ರಾಣಿ ರೋಗ ನಿಯಂತ್ರಣ ಕಾರ್ಯಕ್ರಮ ಮತ್ತು ಪರಿಷ್ಕೃತ ಡೈರಿ ಅಭಿವೃದ್ಧಿ ಎಂಬ ನಾಲ್ಕು ಪ್ರಮುಖ ಗುರಿಗಳ ಮೇಲೆ ಕೇಂದ್ರೀಕರಿಸುವ ಮೂಲಕ ಶ್ವೇತ ಕ್ರಾಂತಿ ೨.೦ ಯ ಯಶಸ್ಸನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಕೆಲಸ ಮಾಡುತ್ತಿದೆ ಎಂದರು.

***************

ಮಹಾಪರಿನಿರ್ವಾಣ ದಿವಸದ ಅಂಗವಾಗಿ ಇಂದು ಭಾರತ ರತ್ನ ಡಾ. ಬಿ. ಆರ್ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಿ, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಸಮಾನತೆ, ಸಾಮಾಜಿಕ ಸಾಮರಸ್ಯ ಮತ್ತು ಎಲ್ಲರಿಗೂ ಸಮಾನ ಅವಕಾಶಗಳ ಸಾಂವಿಧಾನಿಕ ಮೌಲ್ಯಗಳನ್ನು ಪುನರುಚ್ಚರಿಸಿದ್ದಾರೆ.

ಉತ್ತರ ಪ್ರದೇಶದ ನೋಯ್ಡಾದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಚಿವರು, ಶಿಕ್ಷಣವು ಹಿಂದುಳಿದ ವರ್ಗಗಳ ಉನ್ನತಿಗೆ ಅಡಿಪಾಯವಾಗಿ ಉಳಿದಿದೆ ಎಂದರು. ಸಮಾಜ ಮತ್ತು ರಾಷ್ಟ್ರದ ಕಡೆಗೆ ವಿದ್ಯಾರ್ಥಿಗಳಿಗೆ ಅವರ ಕರ್ತವ್ಯಗಳನ್ನು ನೆನಪಿಸಿದರು.

೨೦೪೭ ರ ವೇಳೆಗೆ ಭಾರತವು ೪ ಟ್ರಿಲಿಯನ್ ಡಾಲರ್ ಆರ್ಥಿಕತೆಯಿಂದ ೩೫ ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಗುರಿಯನ್ನು ಸಾಧಿಸುವ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು. ಭಾರತವು ಎರಡು ಸಾವಿರದ ೫೦೦ ಡಾಲರ್ ತಲಾ ಆದಾಯದಿಂದ ಇಪ್ಪತ್ತು ಸಾವಿರ ಡಾಲರ್ ತಲಾ ಆದಾಯಕ್ಕೆ ಪರಿವರ್ತನೆಯ ಹಾದಿಯಲ್ಲಿದೆ ಎಂದು ಅವರು ಹೇಳಿದರು.

ಮತ್ತೊಂದೆಡೆ, ನವದೆಹಲಿಯಲ್ಲಿ ರೈಲ್ವೆ ಸಚಿವಾಲಯ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಅಂಬೇಡ್ಕರ್ ಅವರಿಗೆ ಪುಷ್ಪ ನಮನ ಸಲ್ಲಿಸಿದ್ದಾರೆ.

***************

ವಿಮಾನ ಹಾರಾಟ ವ್ಯತ್ಯಯದಿಂದಾಗಿ ಬಾಕಿ ಇರುವ ಎಲ್ಲಾ ಪ್ರಯಾಣಿಕರ ಮರುಪಾವತಿಗಳನ್ನು ವಿಳಂಬವಿಲ್ಲದೆ ಪಾವತಿಸಲು ಇಂಡಿಗೋ ವಿಮಾನ ಸಂಸ್ಥೆಗೆ ನಾಗರಿಕ ವಿಮಾನಯಾನ ಸಚಿವಾಲಯವು ನಿರ್ದೇಶನ ನೀಡಿದೆ.

ರದ್ದಾದ ಅಥವಾ ಅಡ್ಡಿಪಡಿಸಲಾದ ಎಲ್ಲಾ ವಿಮಾನಗಳ ಟಿಕೆಟ್ ಮರುಪಾವತಿ ಪ್ರಕ್ರಿಯೆಯನ್ನು ನಾಳೆ ರಾತ್ರಿ ೮ ಗಂಟೆಯೊಳಗೆ ಪೂರ್ಣಗೊಳಿಸಬೇಕು ಎಂದು ಸಚಿವಾಲಯ ಆದೇಶಿಸಿದೆ. ರದ್ದತಿಯಿಂದ ಪ್ರಯಾಣ ಯೋಜನೆಗಳ ಮೇಲೆ ಪರಿಣಾಮ ಬೀರುವ ಪ್ರಯಾಣಿಕರಿಗೆ ಯಾವುದೇ ಮರು ವೇಳಾಪಟ್ಟಿ ಶುಲ್ಕವನ್ನು ವಿಧಿಸದಂತೆ ವಿಮಾನಯಾನ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ.

ಮರುಪಾವತಿ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಬ ಅಥವಾ ಅನುಸರಣೆ ಇಲ್ಲದಿರುವುದು ತಕ್ಷಣದ ಕ್ರಮಕ್ಕೆ ಕಾರಣವಾಗುತ್ತದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಸುಗಮ ಕುಂದುಕೊರತೆ ಪರಿಹಾರ ಕಾರ್ಯವನ್ನು ಖಚಿತಪಡಿಸಿಕೊಳ್ಳಲು, ಇಂಡಿಗೋಗೆ ಮೀಸಲಾದ ಪ್ರಯಾಣಿಕರ ಬೆಂಬಲ ಮತ್ತು ಮರುಪಾವತಿ ಸೌಲಭ್ಯ ಕೋಶಗಳನ್ನು ಸ್ಥಾಪಿಸಲು ಸೂಚಿಸಲಾಗಿದೆ.

ಬಹು ಅನುಸರಣೆಗಳ ಅಗತ್ಯವಿಲ್ಲದೆ ಮರುಪಾವತಿ ಮತ್ತು ಪರ್ಯಾಯ ಪ್ರಯಾಣ ವ್ಯವಸ್ಥೆಗಳನ್ನು ಪ್ರಕ್ರಿಯೆಗೊಳಿಸಲಾಗಿದೆಯೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಈ ಘಟಕಗಳು ಪ್ರಯಾಣಿಕರನ್ನು ಪೂರ್ವಭಾವಿಯಾಗಿ ಸಂಪರ್ಕಿಸುತ್ತವೆ. ಕಾರ್ಯಾಚರಣೆಯ ಸ್ಥಿರತೆಯನ್ನು ಪುನಃಸ್ಥಾಪಿಸುವವರೆಗೆ ಸ್ವಯಂಚಾಲಿತ ಮರುಪಾವತಿ ವ್ಯವಸ್ಥೆಯು ಸಕ್ರಿಯವಾಗಿರುತ್ತದೆ.

***************

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ ಆಯೋಜಿಸಿರುವ ೧೧ ನೇ ಭಾರತ ಅಂತಾರಾಷ್ಟ್ರೀಯ ವಿಜ್ಞಾನ ಉತ್ಸವ -ಐಐಎಸ್ಎಫ್‌ನ ಮೊದಲ ಅಧಿವೇಶನವು ಇಂದು ಪಂಚಕುಲದ ದಸರಾ ಮೈದಾನದಲ್ಲಿ ಪ್ರಾರಂಭವಾಯಿತು. ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಔಪಚಾರಿಕವಾಗಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ, ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ವಿದ್ಯಾರ್ಥಿಗಳು ಮತ್ತು ಯುವ ವಿಜ್ಞಾನಿಗಳೊಂದಿಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು. ಭಾರತದಲ್ಲಿ ವಿಜ್ಞಾನ ಕ್ಷೇತ್ರವು ಬಹಳಷ್ಟು ಪ್ರಗತಿ ಸಾಧಿಸುತ್ತಿದೆ ಎಂದು ಅವರು ಹೇಳಿದರು. ಬಾಹ್ಯಾಕಾಶದಲ್ಲಿ ಭಾರತದ ಬಗ್ಗೆ ಅವರು ತಮ್ಮ ಅಭಿಪ್ರಾಯಗಳನ್ನು ಸಹ ವ್ಯಕ್ತಪಡಿಸಿದರು.

***************

ತೆರಿಗೆ ವ್ಯವಸ್ಥೆಯನ್ನು ಸರಳೀಕರಿಸುವತ್ತ ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಇನ್ನು ಮುಂದೆ ಆದಾಯ ತೆರಿಗೆಯನ್ನು ಬೇಸರದ ಸಂಗತಿಯಾಗಿ ಯಾರೂ ಪರಿಗಣಿಸಬಾರದು ಎಂದು ಅವರು ಕಿವಿಮಾತು ಹೇಳಿದರು.

ನವದೆಹಲಿಯಲ್ಲಿ ಇಂದು ಖಾಸಗಿ ಮಾಧ್ಯಮ ಸಂಸ್ಥೆಯ ನಾಯಕತ್ವ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನಾಗರಿಕರ ಉನ್ನತಿಗಾಗಿ ಆದಾಯ ತೆರಿಗೆ ಸ್ಲ್ಯಾಬ್‌ಗಳನ್ನು ಹೆಚ್ಚು ಪಾರದರ್ಶಕ, ಸರಳೀಕೃತ ಮತ್ತು ಅನುಸರಣೆಗೆ ಒಳಪಡಿಸುವ ಅಗತ್ಯವಿದೆ ಎಂಬುದನ್ನು ತೋರಿಸಿದರು.

ಕಸ್ಟಮ್ಸ್ ಚೌಕಟ್ಟಿನ ಸಂಪೂರ್ಣ ಪರಿಷ್ಕರಣೆ ಮುಂದಿನ ದೊಡ್ಡ ಕಾರ್ಯವಾಗಿದೆ. ಕಳೆದ ಎರಡು ವರ್ಷಗಳಲ್ಲಿ ಸರ್ಕಾರವು ಕಸ್ಟಮ್ಸ್ ಸುಂಕಗಳನ್ನು ಕಡಿಮೆ ಮಾಡಲಾಗುತ್ತಿದೆ ಮತ್ತು ಕಸ್ಟಮ್ಸ್ ಅನ್ನು ಸರಳೀಕರಿಸಲು ಮಾರ್ಗಗಳನ್ನು ರೂಪಿಸಿ ಅವುಗಳನ್ನು ಹೆಚ್ಚು ಪಾರದರ್ಶಕಗೊಳಿಸುತ್ತಿದೆ ಎಂದು ಅವರು ಹೇಳಿದರು. ಮಧ್ಯಮ ವರ್ಗದ ಕುಟುಂಬಗಳಿಗೆ ಉಳಿತಾಯ ಕಡಿಮೆಯಾಗುತ್ತಿಲ್ಲ; ಬದಲಿಗೆ, ಅವು ಹೂಡಿಕೆಗಳಾಗಿ ಬದಲಾಗುತ್ತಿವೆ ಎಂದು ಹಣಕಾಸು ಸಚಿವರು ಮಾಹಿತಿ ನೀಡಿದರು.

***************

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಯ ೨ನೇ ಹಂತ ಪ್ರಾರಂಭವಾದಾಗಿನಿಂದ ೫೦ ಕೋಟಿ ೯೩ ಲಕ್ಷಕ್ಕೂ ಹೆಚ್ಚು ಎಣಿಕೆ ನಮೂನೆಗಳನ್ನು ಮತದಾರರಲ್ಲಿ ವಿತರಿಸಲಾಗಿದೆ ಎಂದು ಚುನಾವಣಾ ಆಯೋಗ ಇಂದು ತಿಳಿಸಿದೆ. ಈ ಹಂತವು, ಸುಮಾರು ೫೧ ಕೋಟಿ ಮತದಾರರಲ್ಲಿ ಶೇಕಡ ೯೯.೯೩ ರಷ್ಟು ಜನರನ್ನು ಒಳಗೊಳ್ಳಲಿದೆ.

***************

ವಿಶಾಖಪಟ್ಟಣಂನಲ್ಲಿ ನಡೆಯುತ್ತಿರುವ ಭಾರತ-ದಕ್ಷಿಣ ಆಫ್ರಿಕಾ ನಡುವಿನ ಮೂರನೇ ಏಕದಿನ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೨೭೦ ರನ್ ಗಳಿಸಿದೆ. ಗುರಿ ಬೆನ್ನತ್ತಿರುವ ಭಾರತ ತಂಡ ಇತ್ತೀಚಿನ ವರದಿ ಬಂದಾಗ ೨೮ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೫೫ ಗಳಿಸಿ ಆಡುತ್ತಿದೆ.

ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಆಫ್ರಿಕಾ ತಂಡದ ಪರವಾಗಿ ಕ್ವಿಂಟನ್ ಡಿ ಕಾಕ್ ಶತಕ ಗಳಿಸಿದರೆ, ಭಾರತದ ಪರ ಪ್ರಸಿದ್ಧ್ ಕೃಷ್ಣ ಮತ್ತು ಕುಲ್ದೀಪ್ ಯಾದವ್ ತಲಾ ೪ ವಿಕೆಟ್ ಕಬಳಿಸಿದರು.

ಮೂರು ಪಂದ್ಯಗಳ ಸರಣಿಯು ೧-೧ ರಲ್ಲಿ ಸಮಬಲ ಕಂಡಿದ್ದು, ಮೂರನೇ ಹಾಗೂ ಕೊನೆಯ ಪಂದ್ಯವು ಎರಡೂ ತಂಡಗಳಿಗೆ ಪ್ರಶಸ್ತಿ ಗೆಲ್ಲಲು  ನಿರ್ಣಾಯಕವಾಗಿದೆ.

*******ಮುಕ್ತಾಯ*******